# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 975 (1010) |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ |
| ಉತ್ತರಿಸುವ ದಿನಾಂಕ | : | 25.07.2024 |
| ಉತ್ತರಿಸುವವರು | : | ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾಡಾನೆಗಳ ದಾಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು: | ರಾಜ್ಯದಲ್ಲಿ ಕಾಡಾನೆಗಳ ಹಾವಳಿಯನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>**ಭೌತಿಕ ಅಡೆತಡೆಗಳ ನಿರ್ಮಾಣ:**<br>• ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದೆ.<br>• ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಬಳಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 332.962 ಕಿ.ಮೀ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ.<br><br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ:01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ:30.06.2023 ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ:18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ 08 ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ.<br><br>**ಆವಾಸ ಸ್ಥಾನ ಅಭಿವೃದ್ಧಿ:**<br>• ಅರಣ್ಯ ವ್ಯಾಪ್ತಿಯ ಹುಲ್ಲುಗಾವಲು ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ, ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ, ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |

**ತ್ವರಿತ ಕಾರ್ಯಾಚರಣೆ:**

- ಆನೆ ಕಾರ್ಯಪಡೆ (ETF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.
- ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.
- ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.
- ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
- ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
- ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.
- ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗುತ್ತಿದೆ.
- ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.

**ಅರಿವು ಮೂಡಿಸಲು:**

- ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.

**ಸಹಾಯ ಧನ:**

- ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತಾ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.

**ತಂತ್ರಜ್ಞಾನ ಬಳಕೆ:**

- ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ "ಹೆಜ್ಜೆ" ಎಂಬ ಡ್ಯಾಶ್ ಬೋರ್ಡ್ ನ್ನು ಸಿದ್ಧಪಡಿಸಲಾಗಿದೆ.
- ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.
- ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್‌ಗಳನ್ನು ಅಳವಡಿಸಲಾಗಿದೆ.
- ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "**AI**" Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.

| | | |
|---|---|---|
| | | • ಡ್ರೋನ್‌ಗಳ ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ. |
| ಆ) | ಕಾಡಾನೆಗಳ ದಾಳಿಯಿಂದ ಮೃತಪಟ್ಟ/ ಶಾಶ್ವತ ಗಾಯಗೊಂಡ ಅಥವಾ ಆಸ್ತಿಪಾಸ್ತಿ ಮತ್ತು ಪ್ರಾಣಗಳಿಗೆ ಹಾನಿಯಾದರ ನೀಡುವ ಪರಿಹಾರದ ಮೊತ್ತವೆಷ್ಟು? (ವಿವರ ನೀಡುವುದು) | ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಅಂಗವಿಕಲತೆ, ಗಾಯಗೊಂಡವರಿಗೆ ಆಸ್ತಿಪಾಸ್ತಿ ನಷ್ಟ ಪ್ರಕರಣಗಳಲ್ಲಿ ನೀಡುತ್ತಿರುವ ಪರಿಹಾರ ಧನ ಮತ್ತು ಮಾಸಾಶನ ಧನವನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯು.ಎಲ್ 2022, ಬೆಂಗಳೂರು ದಿನಾಂಕ:15-12-2022 ರನ್ವಯ ಈ ಕೆಳಕಂಡಂತೆ ಪಾವತಿ ಮಾಡಲಾಗುತ್ತಿದೆ.<br>(ರೂ.ಲಕ್ಷಗಳಲ್ಲಿ) |

| ಕ್ರ. ಸಂ | ಪ್ರಕರಣಗಳ ವಿವರ | ನಿಗಧಿಪಡಿಸಲಾದ ಪರಿಹಾರ ಧನ |
|---|---|---|
| 1 | ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳು | ಸರ್ಕಾರದ ಆದೇಶ ಸಂಖ್ಯೆ ಅಪಜೀ 114 ಎಫ್‌ಡಬ್ಲ್ಯೂಎಲ್ 2022 ದಿನಾಂಕ: 29.04.2025 ರಿಂದ ಜಾರಿಗೆ ಬರುವಂತೆ ಪರಿಹಾರ ಧನವನ್ನು ರೂ. 20.00ಲಕ್ಷಗಳಿಗೆ ಹೆಚ್ಚಿಸಲಾಗಿದೆ. |
| 2 | ಕಾಡುಪ್ರಾಣಿಯಿಂದ ಉಂಟಾಗುವ ಶಾಶ್ವತ ಅಂಗವಿಕಲತೆ | 10.00 |
| 3 | ಕಾಡು ಪ್ರಾಣಿಯಿಂದ ಉಂಟಾಗುವ ಭಾಗಶಃ ಶಾಶ್ವತ ಅಂಗವಿಕಲತೆ | 5.00 |
| 4 | ಕಾಡು ಪ್ರಾಣಿಗಳಿಂದ ಗಾಯಗೊಂಡ ಪ್ರತಿ ವ್ಯಕ್ತಿಗೆ ಗರಿಷ್ಟ ಮೊತ್ತ | 0.60 |
| 5 | ಕಾಡಾನೆ ದಾಳಿಯಿಂದ ಉಂಟಾದ ಆಸ್ತಿ ನಷ್ಟ ಪ್ರತಿ ಪ್ರಕರಣಕ್ಕೆ | 0.20 |
| 6 | ಮಾಸಾಶನ: ವನ್ಯಪ್ರಾಣಿಗಳ ದಾಳಿ / ಹಾವಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಮೃತಪಟ್ಟ ವ್ಯಕ್ತಿಗಳ ಕುಟುಂಬಕ್ಕೆ ಹಾಗೂ ಶಾಶ್ವತ ಅಂಗವಿಕಲತೆಗೊಳಗಾದ ವ್ಯಕ್ತಿಗಳಿಗೆ ನೀಡುತ್ತಿರುವ ಪರಿಹಾರ ಧನದ ಜೊತೆಗೆ ಪ್ರತಿ ತಿಂಗಳಂತೆ 5 ವರ್ಷಗಳವರೆಗೆ ಮಾಸಾಶನ | 0.04 |

| | | |
|---|---|---|
| ಇ) | ಪರಿಹಾರ ಮೊತ್ತ ಪಡೆಯಲು ಇರುವ ಮಾನದಂಡಗಳು ಯಾವುವು? | ಸರ್ಕಾರದ ಆದೇಶದನ್ವಯ ಈ ಕೆಳಕಂಡ ಮಾನದಂಡಗಳನ್ವಯ ಹಾನಿಗೊಳಗಾದ ಸಂತ್ರಸ್ತರಿಗೆ / ವಾರಸುದಾರರಿಗೆ ನಿಯಾಮಾನುಸಾರ ಪರಿಹಾರ ಪಾವತಿಸಲಾಗುತ್ತಿದೆ.<br>• ಒತ್ತುವರಿಗೊಂಡ ಅರಣ್ಯ ಭೂಮಿಯಲ್ಲಿರುವ ಆಸ್ತಿಯು ವನ್ಯಪ್ರಾಣಿಯಿಂದ ನಷ್ಟವಾದಲ್ಲಿ, ಅಂಥ ಆಸ್ತಿಯ ನಷ್ಟಕ್ಕೆ ಪರಿಹಾರಧನ ನೀಡಲಾಗುವುದಿಲ್ಲ. |

| | | |
|---|---|---|
| | | • ಕಾಡುಪ್ರಾಣಿಗಳ ಹಾವಳಿ/ದಾಳಿಗೆ ಸಿಲುಕಿ ಮಾನವ ಪ್ರಾಣ ಹಾನಿಯಾದಲ್ಲಿ ಮೃತವ್ಯಕ್ತಿಯು ಅರಣ್ಯ ಪ್ರದೇಶಗಳಲ್ಲಿ ಕಾನೂನುಬಾಹಿರ ಚಟುವಟಿಕೆಯಲ್ಲಿ ತೊಡಗಿಲ್ಲವೆಂದು ಹಾಗೂ ಮರಣೋತ್ತರ ಪರೀಕ್ಷಾ ವರದಿಯಲ್ಲಿ ಮೃತ ವ್ಯಕ್ತಿಯು ವನ್ಯಮೃಗಗಳಿಂದ/ವನ್ಯಪ್ರಾಣಿಗಳ ದಾಳಿಯಿಂದ ಮೃತನಾಗಿದ್ದಾನೆಂದು ಖಚಿತವಾಗಿ ದೃಢಪಟ್ಟಲ್ಲಿ ಮೃತವ್ಯಕ್ತಿಯ ಕಾನೂನುಬದ್ಧ ವಾರಸುದಾರರಿಗೆ ಪರಿಹಾರ ಧನವನ್ನು ಪಾವತಿಸುವುದು.<br>• ಮಾನವ ಪ್ರಾಣ ಹಾನಿಗೆ ಮೊದಲು 15 ಲಕ್ಷ ಇದ್ದುದನ್ನು ನಂತರ ದಿನಾಂಕ: 29.04.2025ರ ಆದೇಶದಂತೆ ರೂ. 20 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಪರಿಹಾರ ಧನದ ಮೊತ್ತ ರೂ.20.00 ಲಕ್ಷಗಳಲ್ಲಿ ರೂ.5.00 ಲಕ್ಷಗಳನ್ನು ಘಟನೆ ನಡೆದ ತಕ್ಷಣವೇ ವಾರಸುದಾರರಿಗೆ ಪಾವತಿಸಲಾಗುವುದು. ಉಳಿದ ಮೊತ್ತ ರೂ. 15.00 ಲಕ್ಷಗಳನ್ನು ಕ್ಷೇತ್ರ ವ್ಯಾಪ್ತಿಯ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಹಂತದಲ್ಲಿ ಅಥವಾ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳಿಂದ ವಿಚಾರಣೆ ನಡೆಸಿ, ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಪಡೆದುಕೊಂಡು ಅವುಗಳನ್ನು ಪರಿಶೀಲಿಸಿ ಖಚಿತಪಡಿಸಿಕೊಂಡು, ಕಾನೂನುಬದ್ಧ ವಾರಸುದಾರರಿಗೆ ಪಾವತಿಸಲಾಗುವುದು. |

**ಸಂಖ್ಯೆ: ಅಪಜೀ 111 ಎಫ್‌ಡಬ್ಲ್ಯೂಎಲ್ 2024**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು